



ಅರುಣ ಪಿ. ಭಟ್ಟ


## ವಾರಭವಿಷ್ಯ: 26.06.2025ರಿಂದ 02.07.2025ರವರೆಗೆ




ಈ ವಾರದ ಆರಂಭದಲ್ಲೇ ಸಂಬಂಧಿಕರ ಭೇಟಿಗೆ ನಿಶ್ಚಯಿಸುವ ಸಾಧ್ಯತೆ ಇದೆ. ಬಹಳ ಕಾಲದ ನಂತರ ಸೋದರ ಸಂಬಂಧಿಗಳನ್ನು ಭೇಟಿ ಆಗಲಿದ್ದೀರಿ. ಇನ್ನು ಉದ್ಯೋಗಸ್ಥರಿಗೆ ತಾತ್ಕಾಲಿಕ ವರ್ಗಾವಣೆ ಸಾಧ್ಯತೆ ಇದೆ. ವಾರದ ಮಧ್ಯ ಭಾಗದಲ್ಲಿ ಕೌಟುಂಬಿಕ ಜೀವನ ಸಂತೋಷವಾಗಿರುತ್ತದೆ. ವ್ಯಾಪಾರದಲ್ಲಿ ಉತ್ತಮ ಪ್ರಗತಿ ಇದೆ. ಶುಭದಿನ: 27. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಈ ವಾರದ ಶುರುವಿನಲ್ಲೇ ಆದಾಯ ಹೆಚ್ಚಿಸಿಕೊಳ್ಳುವಲ್ಲಿ ಯಶಸ್ವಿಯಾಗುತ್ತೀರಿ. ಉದ್ಯಮಿಗಳು ಹಿಂದೆಂದಿಗಿಂತ ಹೆಚ್ಚು ಚಟುವಟಿಕೆಯಿಂದ ಕೆಲಸ ಮಾಡುತ್ತೀರಿ. ವರ್ಚಸ್ಸು, ಸ್ಥಾನಮಾನ ಕೂಡ ಇದೇ ಅವಧಿಯಲ್ಲಿ ಹೆಚ್ಚಾಗಲಿದೆ. ಪ್ರೀತಿಪಾತ್ರರಿಗೆ ಉಡುಗೊರೆಗಳನ್ನು ನೀಡುವ ಸಾಧ್ಯತೆ ಇದೆ. ವೈಯಕ್ತಿಕ ಜೀವನದಲ್ಲಿ ಸಣ್ಣ ಪುಟ್ಟ ವಿಷಯಗಳಿಗೂ ಭಿನ್ನಾಭಿಪ್ರಾಯ ತಲೆದೋರಲಿದೆ. ಶುಭದಿನ: 28. ಹನುಮಾನ್ ಚಾಲೀಸ್ ಪಠಿಸಿರಿ.





ವ್ಯಾಪಾರ ಉದ್ಯಮ ಮಾಡುತ್ತಿರುವವರಿಗೆ ಅತ್ಯುತ್ತಮ ಸಮಯ ಇದು. ಆರೋಗ್ಯ ಕೂಡ ಈ ಅವಧಿಯಲ್ಲಿ ಉತ್ತಮವಾಗಿರುತ್ತದೆ. ನೀವು ಅಂದುಕೊಂಡ ಹಲವು ಕೆಲಸಗಳು ಪೂರ್ಣಗೊಳ್ಳುತ್ತವೆ. ಸಾಮಾಜಿಕ ಸ್ಥಾನಮಾನವು ಹೆಚ್ಚಾಗಲಿದೆ. ನಿಮ್ಮ ಉತ್ಸಾಹ ಸಹ ಹೆಚ್ಚಾಗಲಿದೆ. ವಾರದ ಅಂತ್ಯಕ್ಕೆ ಆರೋಗ್ಯದಲ್ಲಿ ಸ್ವಲ್ಪಮಟ್ಟಿಗೆ ಏರಿಳಿತ ಕಾಣುತ್ತೀರಿ. ಶುಭದಿನ: 29. ಗಣಪತಿಗೆ ದೂರ್ವಾರ್ಚನೆ ಮಾಡಿರಿ.





ಶೈಕ್ಷಣಿಕ ವಲಯದಲ್ಲಿ ಇರುವವರ ಸಾಧನೆಗೆ ಅತ್ಯುತ್ತಮವಾದ ಅವಧಿ ಇದು. ಹಲವು ಅವಕಾಶಗಳು ಒಟ್ಟೊಟ್ಟಿಗೆ ಬರಲಿವೆ. ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ಮಾಡಬೇಡಿ. ಮುಂಬರುವ ದಿನಗಳಲ್ಲಿ ಹಲವು ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರಲಿವೆ. ಯಾವುದಾದರೂ ಮೂಲದಿಂದ ವಾರದ ಅಂತ್ಯದ ವೇಳೆ ತುಂಬ ಒಳ್ಳೆಯ ಮೊತ್ತ ನಿಮ್ಮ ಪಾಲಿಗೆ ದೊರೆಯಲಿದೆ. ಶುಭದಿನ: 30. ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಿಂದಲೇ ಕೆಲಸಗಳನ್ನು ಪೂರೈಸಲು ಶ್ರಮ ಹಾಕುತ್ತೀರಿ. ನಿಮ್ಮ ಸ್ಥಾನಮಾನಕ್ಕೆ ಧಕ್ಕೆ ಆಗುವ ಸಾಧ್ಯತೆ ಇದೆ. ಯಾರನ್ನೂ ಸುಮ್ಮನೆ ನಂಬುವುದು ಒಳ್ಳೆಯದಲ್ಲ. ವಂಚಕರ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಸಾಧ್ಯತೆ ಇದೆ. ಹಣಕಾಸು ಸ್ಥಿತಿ ಉತ್ತಮವಾಗಲಿದೆ. ವಾರದ ಕೊನೆಯಲ್ಲಿ ನಿಮ್ಮ ವರ್ಚಸ್ಸು ಹೆಚ್ಚಾಗುತ್ತಾ ಸಾಗುತ್ತದೆ. ಶುಭದಿನ: 27. ಲಿಂಗಾಷ್ಟಕ ಪಠಿಸಿರಿ.





ವಾರದ ಆರಂಭದಿಂದಲೇ ವ್ಯವಹಾರದಲ್ಲಿ ನಿಮ್ಮ ಕನಸನ್ನು ಈಡೇರಿಸಿಕೊಳ್ಳಲು ಶ್ರಮ ಹಾಕುತ್ತೀರಿ. ಭೂ ಖರೀದಿ ವ್ಯವಹಾರಕ್ಕೆ ಸಂಬಂಧಿಸಿದಂತೆ ಹಲವು ಅವಕಾಶಗಳು ನಿಮಗೆ ದೊರೆಯುತ್ತವೆ. ನಿಮ್ಮ ವರ್ಚಸ್ಸು ಹಾಳು ಮಾಡಲು ವಿರೋಧಿ ಪಾಳಯದವರು ಬಹಳ ಪ್ರಯತ್ನಪಡುತ್ತಾರೆ. ನೀವು ಈ ಬಗ್ಗೆ ಬಹಳ ಎಚ್ಚರಿಕೆಯಿಂದ ಇರಬೇಕು. ಶುಭದಿನ: 01. ಚಂಡಿ ಪಾರಾಯಣ ಮಾಡಿರಿ.





ಕೌಟುಂಬಿಕ ವಿಚಾರದಲ್ಲಿ ವಾರದ ಶುರುವಿನಲ್ಲಿ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಹಣಕಾಸಿಗೆ ಕೊರತೆ ಇರುವುದಿಲ್ಲ. ಉದ್ಯೋಗದಲ್ಲಿ ಆಲಸ್ಯ ನಿಮ್ಮನ್ನು ಕಾಡಬಹುದು. ನಿಮ್ಮ ದೈನಂದಿನ ವ್ಯವಹಾರಗಳಲ್ಲಿ ಏರಿಳಿತಗಳಾಗುತ್ತವೆ. ಶ್ರಮಕ್ಕೆ ಉತ್ತಮ ಫಲಿತಾಂಶ ಸಿಗಲು ಶುರುವಾಗುತ್ತದೆ. ವಾರದ ಅಂತ್ಯಕ್ಕೆ ಎಲ್ಲ ಕ್ಷೇತ್ರಗಳಲ್ಲೂ ಮಿಶ್ರ ಫಲಿತಾಂಶವನ್ನು ಕಾಣಲಿದ್ದೀರಿ. ಶುಭದಿನ: 28. ಸೌಂದರ್ಯ ಲಹರಿ ಪಠಿಸಿರಿ.





ಶೈಕ್ಷಣಿಕ ರಂಗದಲ್ಲಿ ಕಾರ್ಯ ನಿರ್ವಹಿಸುವವರಿಗೆ ವಾರದ ಆರಂಭದಲ್ಲಿ ಅದ್ಭುತವಾದ ಯಶಸ್ಸು ದೊರೆಯುವ ಅವಕಾಶಗಳಿವೆ. ಆದಾಯ ಮೂಲಗಳು ನೀವು ಅಂದುಕೊಂಡಿದ್ದಕ್ಕಿಂತ ಹೆಚ್ಚಿನ ಲಾಭವನ್ನು ತಂದುಕೊಡುವ ಸಾಧ್ಯತೆ ಇದೆ. ಖರ್ಚಿನ ಪ್ರಮಾಣ ಹೆಚ್ಚಳವಾಗಬಹುದು. ನಿಮ್ಮ ಕೆಲಸಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಬೇಕಾದ ಒತ್ತಡ ಹೆಚ್ಚಾಗುತ್ತದೆ. ಶುಭದಿನ: 27. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.





ಉದ್ಯೋಗಸ್ಥರಿಗೆ ತಮ್ಮ ಗೌರವ ಉಳಿಸಿಕೊಳ್ಳುವುದು ಮುಖ್ಯವಾಗುತ್ತದೆ. ಕೌಟುಂಬಿಕ ಜೀವನದಲ್ಲಿ ನಿಮ್ಮ ಜವಾಬ್ದಾರಿಗಳು ಹೆಚ್ಚಾಗಲಿವೆ. ಸಂತಾನ ನಿರೀಕ್ಷೆಯಲ್ಲಿ ಇರುವ ದಂಪತಿಗೆ ಶುಭ ಸುದ್ದಿ. ನಿಮಗೆ ಅನುಕೂಲಕರವಾದ ಕೆಲ ಬೆಳವಣಿಗೆಗಳು ಆಗಲಿವೆ. ಸಂಗಾತಿ ಜೊತೆಗೆ ಇಷ್ಟದ ಪ್ರದೇಶಗಳಿಗೆ ಪ್ರಯಾಣಕ್ಕೆ ತೆರಳುವಿರಿ. ಶುಭದಿನ: 02. ಕಾಲಭೈರವನ ಸೇವೆ ಮಾಡಿರಿ.




ನಿಮ್ಮ ಜ್ಞಾನ ಹೆಚ್ಚಿಸಿಕೊಳ್ಳಲು ಉತ್ತಮವಾದ ಅವಕಾಶ ದೊರೆಯಲಿದೆ. ನಿಮ್ಮ ಶ್ರಮಕ್ಕೆ ಉತ್ತಮ ಪ್ರತಿಫಲ ದೊರೆಯುತ್ತದೆ. ಕುಟುಂಬದಲ್ಲಿ ಸಕಾರಾತ್ಮಕವಾದ ವಾತಾವರಣ ಸೃಷ್ಟಿಸುವಲ್ಲಿ ಯಶಸ್ವಿಯಾಗುತ್ತೀರಿ. ಉದ್ಯೋಗಸ್ಥರಿಗೆ ಬಡ್ತಿ ದೊರೆಯುವ ಅವಕಾಶಗಳಿವೆ. ನಿಮ್ಮ ಕೌಶಲವನ್ನು ಹೆಚ್ಚಿಸಿಕೊಳ್ಳಲು ಶ್ರಮ ಹಾಕಿ. ರಾಜಕೀಯವಾಗಿ ವರ್ಚಸ್ಸು ಉಳಿಸಿಕೊಳ್ಳುತ್ತೀರಿ. ಶುಭದಿನ: 29. ವಿಷ್ಣು ಸಹಸ್ರನಾಮ ಮಾಡಿ.




ವಾರದ ಶುರುವಿನಲ್ಲಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ಕೆಲಸ ಮಾಡುವ ನಿಮ್ಮ ಸಾಮರ್ಥ್ಯ ನಿರಂತರವಾಗಿ ಹೆಚ್ಚಾಗುತ್ತದೆ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಅಷ್ಟೇನೂ ಉತ್ತಮವಾಗಿ ಇರುವುದಿಲ್ಲ. ಇದು ನಿಮ್ಮ ಚಿಂತೆಗೆ ಕಾರಣವಾಗಲಿದೆ. ತಾಯಿಯ ಆರೋಗ್ಯ ಸಮಸ್ಯೆಯಾಗಿ ಬೇಸರಕ್ಕೆ ಕಾರಣವಾಗಬಹುದು. ಶುಭದಿನ: 02. ಗಣೇಶಪಂಚರತ್ನ ಸ್ತೋತ್ರ ಪಠಿಸಿರಿ.




ವಾರದ ಆರಂಭದಲ್ಲಿ ಉದ್ಯಮ ವಿಸ್ತರಣೆ ಬಗ್ಗೆ ಆಲೋಚನೆ ಮಾಡುತ್ತೀರಿ. ದೀರ್ಘಾವಧಿ ಜವಾಬ್ದಾರಿಯೊಂದನ್ನು ನೀವೇ ಪೂರ್ಣಗೊಳಿಸಲು ಒಪ್ಪಿಕೊಳ್ಳುತ್ತೀರಿ. ಸುತ್ತಾಟ ಮಾಡಿ ಬಂದ ನಂತರ ಆರೋಗ್ಯದಲ್ಲಿ ಏರುಪೇರು ಕಾಣಿಸಿಕೊಳ್ಳುತ್ತದೆ. ಸಾಮಾಜಿಕ ಹಾಗೂ ರಾಜಕೀಯ ಕ್ಷೇತ್ರದ ಉತ್ತಮ ಪ್ರಗತಿಗೆ ಅವಕಾಶ ದೊರೆಯಲಿದೆ. ಶುಭದಿನ: 30. ಲಕ್ಷ್ಮೀನರಸಿಂಹ ಸ್ತೋತ್ರ ಪಠಿಸಿರಿ.